ಕರ್ನಾಟಕ ಸರ್ಕಾರ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಬಿಟಿಇ/12/ಇಎಪಿ(ಇತರೆ)/2024

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು -560001
ದಿನಾಂಕ:11.02.2025

**ಸುತ್ತೋಲೆ**

ವಿಷಯ: ಡಿಪ್ಲೊಮಾ ವಿದ್ಯಾರ್ಥಿಗಳ ಅಂಕಪಟ್ಟಿಗಳು, ಪ್ರಮಾಣ ಪತ್ರಗಳು ಹಾಗೂ ಇನ್ನಿತರೆ ಶೈಕ್ಷಣಿಕ ದಾಖಲೆಗಳಲ್ಲಿ, ವಿದ್ಯಾರ್ಥಿಗಳ ಹೆಸರು, ತಂದೆ ತಾಯಿಯ ಹೆಸರು, ಜನ್ಮ ದಿನಾಂಕ ಇನ್ನಿತರೆ ವಿವರಗಳನ್ನು ತಿದ್ದುಪಡಿ ಮಾಡುವ ಕುರಿತು.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಇತ್ತೀಚಿಗೆ ರಾಜ್ಯದ ಹಲವಾರು ಸರ್ಕಾರಿ,ಅನುದಾನಿತ ಮತ್ತು ಖಾಸಗಿ ಪಾಲಿಟೆಕ್ನಿಕ್ ಗಳಲ್ಲಿ ಡಿಪ್ಲೋಮಾ ವ್ಯಾಸಂಗ ಮಾಡಿ ಉತ್ತೀರ್ಣ/ಅನುತ್ತೀರ್ಣಗೊಂಡಿರುವ ಹಾಗೂ ಪ್ರಸ್ತುತ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಅಂಕಪಟ್ಟಿಗಳು,ಪ್ರಮಾಣ ಪತ್ರಗಳು ಹಾಗೂ ಇನ್ನಿತರೆ ಶೈಕ್ಷಣಿಕ ದಾಖಲೆಗಳಲ್ಲಿ ವಿದ್ಯಾರ್ಥಿಗಳ ಹೆಸರು,ತಂದೆ ತಾಯಿಯರ ಹೆಸರು, ಜನ್ಮ ದಿನಾಂಕ ಇನ್ನಿತರೆ ವಿವರಗಳ ತಿದ್ದುಪಡಿಗಳನ್ನು ಅವರ ಎಸ್.ಎಸ್.ಎಲ್.ಸಿ/10ನೇ ತರಗತಿಯ ಅಂಕಪಟ್ಟಿಯಲ್ಲಿರುವಂತೆ ತಿದ್ದುಪಡಿ ಮಾಡುವುದಕ್ಕೆ ಸಂಬಂಧಿಸಿದ ಪಾಲಿಟೆಕ್ನಿಕ್ ಗಳ ಮೂಲಕ ಗಣನೀಯ ಪ್ರಮಾಣದಲ್ಲಿ ಅರ್ಜಿಗಳು ತಾಂತ್ರಿಕ ಪರೀಕ್ಷಾ ಮಂಡಳಿಯಲ್ಲಿ ಸ್ವೀಕೃತಗೊಳ್ಳುತ್ತಿವೆ. ಇವುಗಳನ್ನು ವಿದ್ಯಾರ್ಥಿಗಳ ಮುಂದಿನ ಶೈಕ್ಷಣಿಕ ಹಾಗೂ ಉದ್ಯೋಗದ ಹಿತದೃಷ್ಠಿಯಿಂದ ಆದ್ಯತೆಯಲ್ಲಿ ಪರಿಗಣಿಸಿ ನಿಯಮಾನುಸಾರ ತಿದ್ದುಪಡಿಮಾಡುವ ಕಾರ್ಯ ನಡೆಯುತ್ತದೆ.

ಈ ಹಿನ್ನೆಲೆಯಲ್ಲಿ ಸಮಸ್ಯೆಯ ಉಲ್ಬಣದ ಮೂಲವನ್ನು ಹುಡುಕಲಾಗಿ ಸಂಸ್ಥೆಗಳಿಂದ ವಿದ್ಯಾರ್ಥಿಗಳ ವಿವರಗಳನ್ನು BTE link ನಲ್ಲಿ upload ಮಾಡುವ ದತ್ತಾಂಶದಲ್ಲಿಯೇ ತಪ್ಪಾದ ವಿವರಗಳು ದಾಖಲಾಗಿರುವುದನ್ನು ಗಮನಿಸಲಾಗಿದೆ. ಇದರಿಂದಾಗಿ ಈ ನ್ಯೂನ್ಯತೆಯಲ್ಲಿ ಪಾಲುದಾರರಲ್ಲದ ವಿದ್ಯಾರ್ಥಿಗಳಿಗೆ ತೊಂದರೆ ಆಗುತ್ತಿರುವುದು ವಿಷಾದನೀಯ. ಆದಕಾರಣ ಸದರಿ ಸಮಸ್ಯೆಗೆ ಸಂಸ್ಥೆಗಳಲ್ಲಿಯೇ ಪರಿಹಾರವಿದ್ದು, ಇದನ್ನು ಇನ್ನು ಮುಂದೆ ಪರಿಣಾಮಕಾರಿಯಾಗಿ ನಿರ್ವಹಿಸಲು ಎಲ್ಲಾ ಪ್ರಾಂಶುಪಾಲರಿಗೆ ಕೆಳಕಂಡ ನಿರ್ದೇಶನವನ್ನು ನೀಡಲಾಗಿದೆ.

ಎಲ್ಲಾ ಸಂಸ್ಥೆಗಳ ಪ್ರಾಂಶುಪಾಲರುಗಳು ಆಯಾ ಶೈಕ್ಷಣಿಕ ವರ್ಷದ ಪ್ರವೇಶ ಪ್ರಕ್ರಿಯೆಗಳು ಮುಗಿದಕೂಡಲೆ ತಾಂತ್ರಿಕ ಪರೀಕ್ಷಾ ಮಂಡಳಿಗೆ ಸಲ್ಲಿಸಬೇಕಾದ ಎಲ್ಲಾ ವಿವರಗಳನ್ನು ವಿದ್ಯಾರ್ಥಿಗಳ ಎಸ್ .ಎಸ್.ಎಲ್.ಸಿ/10ನೇ ತರಗತಿಯ ಅಂಕಪಟ್ಟಿಯಲ್ಲಿರುವಂತೆ ಹೆಸರು, ತಂದೆ ತಾಯಿಯ ಹೆಸರು,(Spelling, Space in between NAME and Initials) ಜನ್ಮ ದಿನಾಂಕ ಇನ್ನಿತರೆ ನಮೂದುಗಳನ್ನು ತಾಂತ್ರಿಕ ಶಿಕ್ಷಣ ಆಯುಕ್ತಾಲಯದ ಶೈಕ್ಷಣಿಕ(ACM) ವಿಭಾಗದಿಂದ ನೀಡಿರುವ ನಿಗದಿತ ನಮೂನೆಯಲ್ಲಿ ದಾಖಲಿಸಿ ಸದರಿ ವಿವರಗಳನ್ನು ಸಂಬಂಧಿಸಿದ ವಿದ್ಯಾರ್ಥಿಗಳ ವೈಯಕ್ತಿಕ ಗಮನಕ್ಕೆ ಖುದ್ದಾಗಿ ಒದಗಿಸಿ ಆ ವಿವರಗಳನ್ನು ಪರಿಶೀಲಿಸಿದ ನಂತರ ವಿದ್ಯಾರ್ಥಿಯ ಸಹಿ ಪಡೆದು ಆ ನಂತರದಲ್ಲಿ candidate list ಅನ್ನು BTE link ನಲ್ಲಿ upload ಮಾಡಲು ತಿಳಿಸಲಾಗಿದೆ.

Scanned with OKEN Scanner

ಒಂದು ವೇಳೆ ಈ ಪ್ರಕ್ರಿಯೆಯಲ್ಲಿ ಏನಾದರೂ ಲೋಪಗಳುಂಟಾಗಿ ಪುನಃ ಡಿಪ್ಲೋಮಾ ಅಂಕಪಟ್ಟಿಗಳಲ್ಲಿ/ ಡಿಪ್ಲೋಮಾ ಪ್ರಮಾಣ ಪತ್ರಗಳಲ್ಲಿ ವಿದ್ಯಾರ್ಥಿಗಳ ಹೆಸರು,ತಂದೆ ತಾಯಿಯ ಹೆಸರು, ಜನ್ಮ ದಿನಾಂಕ ಹಾಗೂ ಇನ್ನಿತರೆ ವಿವರಗಳ ತಿದ್ದುಪಡಿಗಾಗಿ ತಾಂತ್ರಿಕ ಪರೀಕ್ಷಾ ಮಂಡಳಿಗೆ ಪ್ರಸ್ತಾವನೆಗಳನ್ನು ಸಲ್ಲಿಸುವ ಪ್ರಮೇಯ ಉಂಟಾದಲ್ಲಿ ಮುಂದಿನ ಪರಿಣಾಮಗಳಿಗೆ ಸಂಬಂಧಪಟ್ಟ ಪ್ರಾಂಶುಪಾಲರುಗಳನ್ನೇ ನೇರಹೊಣೆಗಾರರನ್ನಾಗಿ ಮಾಡಲಾಗುವುದೆಂದು ತಿಳಿಸಲಾಗಿದೆ.

ಕಾರ್ಯದರ್ಶಿಗಳು

ತಾಂತ್ರಿಕ ಪರೀಕ್ಷಾ ಮಂಡಳಿ

ಇವರಿಗೆ:

ಎಲ್ಲಾ ಸರ್ಕಾರಿ / ಅನುದಾನಿತ / ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಿಗೆ - ಮುಂದಿನ ಸೂಕ್ತ ಕ್ರಮಕ್ಕಾಗಿ.

ಪ್ರತಿ:

1) ಕಾರ್ಯದರ್ಶಿಯವರ ಆಪ್ತ ಶಾಖೆ.
2) ರಿಜಿಸ್ಟ್ರಾರ್ (ಪರೀಕ್ಷೆ)
3) ಅಧೀಕ್ಷಕರು ಆರ್ ಡಿ ಎಂ ವಲಯ 1/2/3
4) ಇ-ಗವರ್ನೆನ್ಸ್ ವಿಭಾಗಕ್ಕೆ (ವೆಬ್ ಸೈಟ್‌ನಲ್ಲಿ ಪ್ರಕಟಿಸಲು).

Scanned with OKEN Scanner